# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 273 (2089)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ವಿಷಯ : ಗ್ರಾಮಗಳ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಪಡಿಸುವ ಕಾಮಗಾರಿಗಳ ಬಗ್ಗೆ

(ಅ) ನಾಗಮಂಗಲ ತಾಲ್ಲೂಕಿನ ಚೋಳೇನಹಳ್ಳಿ, ಬಂಗ್ಲಿ, ಹೆರಗಹಳ್ಳಿ, ಹೊನ್ನಾವರ, ಕಲ್ಕೆರೆ ಮಲ್ಲೇನಹಳ್ಳಿ, ಹೆಚ್.ಭೂವನಹಳ್ಳಿ, ಅಂಕನಹಳ್ಳಿ, ಮಂಚೇನಹಳ್ಳಿ, ಚಬ್ಬನಹಳ್ಳಿ, ತೂಬಿನಕೆರೆ ಮತ್ತು ಹದಮಗೆರೆ ಗ್ರಾಮಗಳ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಪಡಿಸಲು ಕಾಮಗಾರಿಗಳಿಗೆ ಒಟ್ಟಾರೆ ಪ್ಯಾಕೇಜ್ ಮೊತ್ತ 340 ಲಕ್ಷಗಳು ಮಂಜೂರಾಗಿದ್ದು, ಸದರಿ ಕಾಮಗಾರಿಗಳನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದ್ದು, ಅಂದಾಜು ಪಟ್ಟಿಯಲ್ಲಿರುವಂತೆ ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರೈಸದೆ ಇರುವುದು ಸರ್ಕಾರದÀ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಗುಣಮಟ್ಟ ಪರಿಶೀಲಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ಈ ಕಾಮಗಾರಿ ವಿಳಂಬದಿಂದ ಸುತ್ತಮುತ್ತಲಿನ ಸಾರ್ವಜನಿಕರಿಗೆ ದಿನನಿತ್ಯ ಓಡಾಡಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತುರ್ತುಕಾಮಗಾರಿಯನ್ನು ಗುಣಮಟ್ಟದಿಂದ ಯಾವಾಗ ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು)

(ಈ) ಈ ಸಂಬಂಧ ಸಂಬಂಧಪಟ್ಟ ಗುತ್ತಿಗೆದಾರರು ಮತ್ತು ಇಲಾಖಾ ಅಧಿಕಾರಿಗಳ ವಿರುದ್ಧ ಯಾವ ಶಿಸ್ತು ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)